ಆ) ಈ ಅಭಿವೃದ್ಧಿ ಕಾಮಗಾರಿಗಳು ಯಾವ ಹಂತದಲ್ಲಿದೆ? ಈ ಕಾಮಗಾರಿಗಳಿಗೆ ಎಷ್ಟು ಹಣ ಮಂಜೂರು ಮಾಡಲಾಗಿದೆ?

ಇ) ಸದರಿ ಕ್ಷೇತ್ರದಲ್ಲಿ ಕಳೆದ 3 ವರ್ಷಗಳಿಂದ ಇಲ್ಲಿಯವರೆಗೆ ಎಷ್ಟು ಪಶು ಆಸ್ಪತ್ರೆಗಳನ್ನು ಮಂಜೂರು ಮಾಡಲಾಗಿದೆ? (ವಿವರ ನೀಡುವುದು):

ಶ್ರೀ ರೇವೂ ನಾಯಕ ಬೆಳಮಗಿ (ಪಶು ಸಂಗೋಪನೆ ಸಚಿವರು)

ಅ) 2008–09ನೇ ಸಾಲಿನಲ್ಲಿ ಬಿಜಾಪುರ ಜಿಲ್ಲೆಯ ದೇವರ ಹಿಪ್ಪರಗಿ ಮತಕ್ಷೇತ್ರ ವ್ಯಾಪ್ತಿಯ ಕಲಕೇರಿ ಪಶು ಚಿಕಿತ್ಸಾಲಯಕ್ಕೆ ಹೊಸ ಕಟ್ಟಡ ನಿರ್ಮಾಣ, ತುಂಬಗಿ ಪಶು ಚಿಕಿತ್ಸಾಲಯ ಕಟ್ಟಡದ ದುರಸ್ತಿ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗಿತ್ತು.

2009–10ನೇ ಸಾಲಿನಲ್ಲಿ ದೇವರ ಹಿಪ್ಪರಗಿ ಪಶು ಆಸ್ಪತ್ರೆ ಕಟ್ಟಡ ಹಾಗೂ ಢೋಣೂರು ಪ್ರಾಥಮಿಕ ಪಶು ಚಿಕಿತ್ಸಾ ಕೇಂದ್ರಗಳ ಕಟ್ಟಡ ದುರಸ್ತಿಯನ್ನು ಕೈಗೆತ್ತಿಕೊಳ್ಳಲಾಗಿದೆ.

ಆ) ಕಲಕೇರಿಯ ಪಶು ಚಿಕಿತ್ಸಾಲಯದ ಕಟ್ಟಡ ಕಾಮಗಾರಿ ಮೇಲ್ಛಾವಣಿ ಹಂತದವರೆಗೆ ಬಂದಿದ್ದು ಉಳಿದ ಇತರೆ ರಿಪೇರಿ ಕಾಮಗಾರಿಗಳು ಮುಕ್ತಾಯಗೊಂಡಿವೆ. ಈ ಕಾಮಗಾರಿಗಳಿಗೆ ಒಟ್ಟು ರೂ. 16.90 ಲಕ್ಷ ಮೊತ್ತವನ್ನು ಮಂಜೂರು ಮಾಡಲಾಗಿದೆ.

ಇ) ಸದರಿ ಕ್ಷೇತ್ರಕ್ಕೆ ಕಳೆದ 3 ವರ್ಷಗಳಿಂದ ಯಾವುದೇ ಹೊಸ ಪಶು ಆಸ್ಪತ್ರೆಗಳನ್ನು ಮಂಜೂರು ಮಾಡಿರುವುದಿಲ್ಲ.

ಪಶು ಆಸ್ಪತ್ರೆಗೆ ಮಂಜೂರಾತಿಯ ಬಗ್ಗೆ

110 (296): ಶ್ರೀ ಪ್ರತಾಪ್ ಗೌಡ ಪಾಟೀಲ್ (ಮಸ್ಕಿ): ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹೊಸ ಪಶು ಆಸ್ಪತ್ರೆಗಳನ್ನು ಮಂಜೂರು ಮಾಡುವ ವಿಚಾರ ಸರ್ಕಾರದ ಮುಂದಿದೆಯೇ?

ಆ) ಮಾಡಿದ್ದಲ್ಲಿ ಯಾವ ಆಧಾರದ ಮೇಲೆ ಮಂಜೂರು ಮಾಡಲಾಗಿದೆ?

ಶ್ರೀ ರೇವೂ ನಾಯಕ ಬೆಳಮಗಿ (ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಗ್ರಂಥಾಲಯ ಮತ್ತು ಸಂಚಾರಿ ಗ್ರಂಥಾಲಯದ ಬಗ್ಗೆ

111 (231): ಶ್ರೀ ಪ್ರಿಯ ಕೃಷ್ಣ (ಗೋವಿಂದರಾಜನಗರ ಕ್ಷೇತ್ರ): ಮಾನ್ಯ ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ;

ಅ) ರಾಜ್ಯದಲ್ಲಿ ಗ್ರಂಥಾಲಯ ಮತ್ತು ಸಂಚಾರಿ ಗ್ರಂಥಾಲಯಗಳ ಸಂಖ್ಯೆ ಎಷ್ಟು? ಅವುಗಳ ಪೈಕಿ ಇಲಾಖೆಯ ಸ್ವಂತ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಂಥಾಲಯಗಳ ಸಂಖ್ಯೆ ಎಷ್ಟು;

ಆ) ಗ್ರಂಥಾಲಯ ಮತ್ತು ಸಂಚಾರಿ ಗ್ರಂಥಾಲಯಗಳ ಸಂಖ್ಯೆಯನ್ನು ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಇ) ಹಾಗಿದ್ದಲ್ಲಿ, ಗೋವಿಂದರಾಜ ನಗರ ಕ್ಷೇತ್ರದಲ್ಲಿ ಗ್ರಂಥಾಲಯ ಹಾಗೂ ಸಂಚಾರಿ ಗ್ರಂಥಾಲಯಗಳು ಅವಶ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಎಷ್ಟು ಗ್ರಂಥಾಲಯ ಹಾಗೂ ಸಂಚಾರಿ ಗ್ರಂಥಾಲಯ ಮಂಜೂರು ಮಾಡಲಾಗಿದೆ; (ವಿವರ ತಿಳಿಸುವುದು);

ಶ್ರೀ ರೇವೂ ನಾಯಕ ಬೆಳಮಗಿ (ಲೋಕ ಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶು ಸಂಗೋಪನೆ ಸಚಿವರು):

ಅ) ರಾಜ್ಯದಲ್ಲಿ ಗ್ರಂಥಾಲಯಗಳು 6,663. ಸಂಚಾರಿ ಗ್ರಂಥಾಲಯ ಗಳು 15, ಸ್ವಂತ ಕಟ್ಟಡ ಹೊಂದಿರುವ ಗ್ರಂಥಾಲಯಗಳು 200.

ಆ) ಇಲ್ಲ.

ಇ) ಗಮನಕ್ಕೆ ಬಂದಿರುವುದಿಲ್ಲ. ಆದಾಗ್ಯೂ ಈಗಾಗಲೇ ಉಪ ನಿರ್ದೇಶಕರ ಕಛೇರಿ, ನಗರ ಕೇಂದ್ರ ಗ್ರಂಥಾಲಯ, ಪಶ್ಚಿಮ ವಲಯ,